**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.989/2025.**

ಪಿರ್ಯಾದುದಾರರುಃ- ಗೋಪಾಲ ಚಂದ್ರು ಗೌಡ,
ವಯಸ್ಸು ಸುಮಾರು 36 ವರ್ಷ,
ವೃತ್ತಿಃ ರೈತ ವ ವ್ಯಾಪಾರ,
ಸಾಕೀನಃ ಹೊಂಡದಗದ್ದೆ, ಮಾವಿನಕುರ್ವಾ,
ತಾಲೂಕುಃ ಹೊನ್ನಾವರ, (ಉ.ಕ).

**-ವಿರುದ್ಧ-**

ಆರೋಪಿಯ ಹೆಸರುಃ- ಅಣ್ಣಪ್ಪ ನಾರಾಯಣ ಗೌಡ,
ಸಾಕೀನಃ ಮುಗುಳಿ, ಗುಣವಂತೆ,
ಪೋಸ್ಟಃ ಗುಣವಂತೆ,
ತಾಲೂಕುಃ- ಹೊನ್ನಾವರ, (ಉ.ಕ.).

****

**ದಂಡ ಪ್ರಕ್ರಿಯಾ ಸಂಹಿತೆ ಕಲಂ. 313 ರನ್ವಯ ಆರೋಪಿಯ ಹೇಳಿಕೆ.**

ಪ್ರಶ್ನೆಃ 1. ನೀವು ಪಿರ್ಯಾದುದಾರರ ಪರವಾಗಿ ಫ್ರಾಸಾ-1 ರವರ ಹೇಳಿಕೆಯನ್ನು ಕೇಳಿದ್ದೀರಾ?

ಆರೋಪಿಯ ಉತ್ತರಃ- ಕೇಳಿದ್ದೇನೆ

ಪ್ರಶ್ನೆಃ 2. ಫ್ರಾಸಾ-1 ರವರು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯ ವಿರುದ್ಧ ಪಿರ್ಯಾದಿಯು ಮೂರು ಪ್ರಕರಣಗಳನ್ನು ಮಾನ್ಯ ಜೆ.ಎಮ್.ಎಫ್.ಸಿ ಹೊನ್ನಾವರ ನ್ಯಾಯಾಲಯದಲ್ಲಿ ದಾಖಲಿಸಿದ್ದು, ಸದ್ರಿ ಕ್ರಿಮಿನಲ್ ಪ್ರಕರಣಗಳ ಸಂಖ್ಯೆ 872/2023, 873/2023, 874/2023, ಆಗಿದ್ದು, ಸದ್ರಿ ಮೂರು ಪ್ರಕರಣಗಳನ್ನು ಆರೋಪಿ ಹಾಗೂ ಪಿರ್ಯಾದಿಯು ರಾಜಿ ಮಾಡಿಕೊಂಡಿದ್ದು, ರಾಜಿಯಂತೆ ರೂ.2,00,000/- ಗಳನ್ನು ಪಿರ್ಯಾದಿಗೆ ಸಂದಾಯ ಮಾಡಲು ಒಪ್ಪಿದ್ದು, ರಾಜಿ ಮೊತ್ತದ ಪೈಕಿ ರೂ.50,000/- ಗಳನ್ನು ಪಿರ್ಯಾದಿಗೆ ಸಂದಾಯ ಮಾಡಿದ್ದು, ಬಾಕಿ ಇರುವ ಸದರಿ ಸಾಲಕ್ಕೆ ಸಂಬಂಧಪಟ್ಟಂತೆ ಆರೋಪಿಯಾದ ನೀವು ಪಿರ್ಯಾದಿಯ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ

**ಕೆನರಾ ಬ್ಯಾಂಕ್., ಗುಣವಂತೆ** ಶಾಖೆಯ ಚೆಕ್ ನಂ.764653 ನ್ನು ದಿನಾಂಕ 10-01-2025 ರಂದು ರೂ. 1,50,000/- ಎಂದು ನಮೂದಿಸಿ ಚೆಕ್ ಗೆ ಸಹಿ ಮಾಡಿಕೊಟ್ಟು, ಸದರಿ ಚೆಕ್ ನ್ನು ಬ್ಯಾಂಕ್ ಗೆ ಹಾಜರುಪಡಿಸಿದ ಕೂಡಲೇ ಹಣ ಸಿಗುತ್ತದೆ ಎಂದು ಭರವಸೆ ನೀಡಿರುತ್ತೀರೆಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆಃ 3. ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಅದರಂತೆ ಪಿರ್ಯಾದಿಯವರು ಹಣ ಪಡೆಯುವ ಸಲುವಾಗಿ ಸದರಿ ಚೆಕನ್ನು ಅವರ ಖಾತೆಯಿರುವ **ಕೆ.ಡಿ.ಸಿ.ಸಿ.ಬ್ಯಾಂಕ್ ಲಿ., ಮಂಕಿ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, 'Account Blocked' ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ 18-03-2025 ರಂದು ನಿಪಿ-2 ರ ಮೆಮೋದೊಂದಿಗೆ ವಾಪಾಸ್ ನೀಡಿರುತ್ತಾರೆ ಎಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆಃ 4. ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿಯವರು ನಿಮಗೆ ವಕೀಲರ ಮೂಲಕ ದಿನಾಂಕ 02-04-2025 ರಂದು ನಿಪಿ-3 ರಂತೆ ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸ್ ನಿಮಗೆ ದಿನಾಂಕ 09-04-2025 ರಂದು ಜಾರಿಯಾಗಿದ್ದರೂ ಸಹ ನೀವು ಸದರಿ ಚೆಕ್ ನಲ್ಲಿ ನಮೂದಿಸಿದ ಹಣವನ್ನು ನೀಡಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆ 5: ನಿಮ್ಮ ಪರವಾಗಿ ಏನಾದರೂ ಸಾಕ್ಷಿ ಇದೆಯೇ?

ಆರೋಪಿಯ ಉತ್ತರಃ- ಇದೆ

ಪ್ರಶ್ನೆ 6: ಸದ್ರಿ ಪ್ರಕರಣ ಕುರಿತು ನೀವು ಏನಾದರೂ ಹೇಳುವುದು ಇದೆಯೇ?

ಆರೋಪಿಯ ಉತ್ತರಃ- ವಿಚಾರಣೆಯಾಗಬೇಕು

(ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ)

ಸಹಿ ಇದೆ/-

**ದಿನಾಂಕಃ- 18-09-2025.**

**(ಅನಿಲ್ ಜೋನ್ ಸಿಕ್ವೇರಾ).,**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ.,ಯವರ ನ್ಯಾಯಾಲಯ.,ಹೊನ್ನಾವರ.**

****

ಆರೋಪಿಯ ಸಹಿಃ- ಸಹಿ ಇದೆ